ಬೆಂಗಳೂರು ದೂರದರ್ಶನದ ಬಳಿ ಮೇಲು ಸೇತುವೆ ನಿರ್ಮಾಣ

259 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ವಕ್ಫ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ದೂರದರ್ಶನ ಕೇಂದ್ರದ ಬಳಿ ಸಾರಿಗೆ ಒತ್ತಡವನ್ನು ತಡೆಗಟ್ಟಲು ಮೇಲು ಸೇತುವೆ ನಿರ್ಮಿಸಲು ಬೆಂಗಳೂರು ಮಹಾನಗರ ಪಾಲಿಕೆ ಸಮೀಕ್ಷೆ ನಡೆಸಿದೆಯೇ?

ಆ) ಹಾಗಿದ್ದಲ್ಲಿ, ಇದಕ್ಕೆ ತಗಲುವ ವೆಚ್ಚವೆಷ್ಟು?

ಇ) ಈ ಮೇಲು ಸೇತುವೆಯ ನಿರ್ಮಾಣದ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಆರ್. ರೋಷನಬೇಗ್ (ಬೆಂಗಳೂರು ಅಭಿವೃದ್ಧಿ ಮತ್ತು ವಕ್ಫರಾಜ್ಯ ಸಚಿವರು) :

ಅ) ಸಮೀಕ್ಷೆ ನಡೆಸಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಂಗಳೂರಿನಲ್ಲಿ ನೀರಿನ ಸಮಸ್ಯೆ

260 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ನಗರಾಭಿವೃದ್ಧಿ ಹಾಗೂ ವಕ್ಫ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬರುವ ಬೇಸಿಗೆ ಸಮಯದಲ್ಲಿ ಬೆಂಗಳೂರಿನಲ್ಲಿ ಉಂಟಾಗುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಳ್ಳಬೇಕಾಗಿರುವ ಕ್ರಮಗಳೇನು?

ಆ) ಖಾಸಗಿ ನೀರಿನ ಟ್ಯಾಂಕರಗಳವರಿಂದ ನೀರನ್ನು ಪಡೆದುಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ?

ಇ) ಬೆಂಗಳೂರು ನಗರದಲ್ಲಿ ಹೊಸದಾಗಿ ಬೋರವೆಲ್‌ಗಳನ್ನು ಕೊರೆಯುವ ಕೆಲಸವನ್ನು ಕೈಗೆತ್ತಿಕೊಳ್ಳಲಾಗುವುದೇ?

ಶ್ರೀ ಆರ್. ರೋಷನ್‌ಬೇಗ್ (ಬೆಂಗಳೂರು ಅಭಿವೃದ್ಧಿ ಮತ್ತು ವಕ್ಫ್‌ರಾಜ್ಯ ಸಚಿವರು) :

ಅ) ತಿಪ್ಪಗೊಂಡನಹಳ್ಳಿ ಜಲಾಶಯದಲ್ಲಿ ಕಳೆದ 2 ವರ್ಷಗಳಿಂದ ಮಳೆ ಬಾರದೇ ನೀರಿನ ಮಟ್ಟವು ಬತ್ತಿರುವುದರಿಂದ ನಗರದ ಎಲ್ಲಾ ಪ್ರದೇಶಗಳಿಗೂ ಕಾವೇರಿ ನೀರನ್ನು ಒದಗಿಸಬೇಕಾಗಿರುತ್ತದೆ. ಆದ್ದರಿಂದ ದಿನ ಬಿಟ್ಟು ದಿನ ನೀರನ್ನು ಸರಬರಾಜು ಮಾಡುವ ವ್ಯವಸ್ಥೆಯನ್ನು ಈಗಾಗಲೇ ಜಾರಿಗೊಳಿಸಲಾಗಿದ್ದು, ತೃಪ್ತಿಕರವಾಗಿ ನೀರನ್ನು ಪೂರೈಸಲಾಗುತ್ತಿದೆ. ಇದೇ ವ್ಯವಸ್ಥೆಯನ್ನು ತಿಪ್ಪಗೊಂಡನಹಳ್ಳಿ ಜಲಾಶಯಕ್ಕೆ ನೀರು ಬರುವವರೆಗೂ ಮುಂದುವರೆಸಲಾಗುವುದು. ನಗರಕ್ಕೆ ಕಾವೇರಿ 1, 2, 3ನೇ ಹಂತಗಳಿಂದ 120 ಮಿಲಿಯನ್ ಗ್ಯಾಲನ್ ನೀರು ದಿನ ಒಂದಕ್ಕೆ ಸರಬರಾಜಾಗುತ್ತಿದೆ. ಜಲಮಂಡಳಿ